ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.
ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 28-06-2016

# ಪತ್ರಿಕಾ ಪ್ರಕಟಣೆ

## ಟೀಯೆಸ್ಸಾರ್, ಮೊಹರೆ ಹಣಮಂತರಾಯ ಸ್ಮಾರಕ ಹಾಗೂ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಜೂನ್ 28 (ಕರ್ನಾಟಕ ವಾರ್ತೆ)

2014-15 ನೇ ಸಾಲಿನ ದಿ. ಟಿ.ಎಸ್.ರಾಮಚಂದ್ರ ರಾವ್ ಹಾಗೂ ದಿ. ಮೊಹರೆ ಹಣಮಂತರಾಯ ಸ್ಮಾರಕ ಪ್ರಶಸ್ತಿಗಳು ಹಾಗೂ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳ ಪ್ರದಾನ ಸಮಾರಂಭವು ಜುಲೈ 1 ರ ಶುಕ್ರವಾರ ಸಂಜೆ 5-00 ಗಂಟೆಗೆ ಬೆಂಗಳೂರು ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ನಡೆಯಲಿದೆ. ರಾಜ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯನವರು ಈ ಪ್ರಶಸ್ತಿಗಳನ್ನು ಪ್ರದಾನ ಮಾಡುವರು.

ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯ ನಗರಾಭಿವೃದ್ಧಿ ಹಾಗೂ ಹಜ್ ಖಾತೆ ಸಚಿವ ಆರ್. ರೋಷನ್ ಬೇಗ್ ಅವರು ವಹಿಸುವರು. ಪ್ರಧಾನ ಭಾಷಣಕಾರರಾಗಿ ಹಿರಿಯ ಪತ್ರಕರ್ತರು ಹಾಗೂ ಮ್ಯಾಗ್ಸೇಸೆ ಪ್ರಶಸ್ತಿ ವಿಜೇತ ಪಿ. ಸಾಯಿನಾಥ್ ಪ್ರಧಾನ ಭಾಷಣ ಮಾಡುವರು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಖಾತೆ ಸಚಿವ ಕೆ.ಜೆ. ಜಾರ್ಜ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಬೆಂಗಳೂರು ಕೇಂದ್ರ ಲೋಕಸಭಾ ಸದಸ್ಯ ಪಿ.ಸಿ. ಮೋಹನ್ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರು ಹಾಗೂ ಟಿ.ಎಸ್.ಆರ್. ಮತ್ತು ಮೊಹರೆ ಹಣಮಂತರಾಯ ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷರಾದ ನ್ಯಾಯಮೂರ್ತಿ ಹೆಚ್. ಎನ್. ನಾಗಮೋಹನ್‌ದಾಸ್ ಅವರು ಪಾಲ್ಗೊಳ್ಳುವರು.

2014 ಮತ್ತು 2015 ನೇ ಸಾಲಿನಲ್ಲಿ ಟೀಯೆಸ್ಸಾರ್ ಪ್ರಶಸ್ತಿ ಪಡೆದವರು ಗಂಗಾಧರ್ ಮೊದಲಿಯಾರ್, ಸನತ್‌ಕುಮಾರ್ ಬೆಳಗಲಿ, ಮೊಹರೆ ಹಣಮಂತರಾಯ ಪ್ರಶಸ್ತಿ ಪಡೆದವರು ಬಸವರಾಜಸ್ವಾಮಿ ಮತ್ತು ಪಿ. ವೆಂಕಟೇಶ್, ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಪಡೆದವರು ಜಿ. ಎನ್. ಮೋಹನ್, ಶೇಷಮೂರ್ತಿ ಅವಧಾನಿ ಹಾಗೂ ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪಡೆದವರು ಗಾಣದಾಳು ಶ್ರೀಕಂಠ ಮತ್ತು ಡಾ. ಎನ್. ಜಗದೀಶ್ ಕೊಪ್ಪ.

ಬಾಬು: ಕೆಎಂ




ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವ ಎಚ್.ಕೆ.ಪಾಟೀಲ ಅವರು ಇಂದು ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆದ ಎಲ್ಲಾ ರಾಜ್ಯಗಳ ಪಂಚಾಯತ ರಾಜ್ ಸಚಿವರ ಸಮ್ಮೇಳನದಲ್ಲಿ ಭಾಗವಹಿಸಿದಾಗ ತೆಗೆದ ಚಿತ್ರ. ಚಿತ್ರದಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವರನ್ನು ಕಾಣಬಹುದು.

# ಪಂಚಾಯತಿಗಳ ಆಡಳಿತ ಪರಿಣಾಮಕಾರಿಗೆ ಬದಲಾವಣೆ ಅಗತ್ಯ

**– ಎಚ್.ಕೆ.ಪಾಟೀಲ.**

**ಬೆಂಗಳೂರು, ಜೂನ್ 28 (ಕರ್ನಾಟಕ ವಾರ್ತೆ)**

ರಾಷ್ಟ್ರದ ಪ್ರಜಾಸತ್ತೆಗೆ ಮೂಲಭೂತ ಅಡಿಪಾಯ ಒದಗಿಸುವ ಪಂಚಾಯತ ರಾಜ್ ಸಂಸ್ಥೆಗಳನ್ನು ಸಬಲಗೊಳಿಸಲು ಕೇಂದ್ರ ಸರ್ಕಾರ ಹೆಚ್ಚುವರಿ ಹಣಕಾಸು ನೀಡಬೇಕು ಮತ್ತು ಕವಲು ದಾರಿಯಲ್ಲಿರುವ ಪಂಚಾಯತಿ ರಾಜ್ ಸಂಸ್ಥೆಗಳ ಆಡಳಿತ ವ್ಯವಸ್ಥೆಯನ್ನು ಪರಿಣಾಮಕಾರಿಗೊಳಿಸಲು ನೀತಿ ನಿರೂಪಣಾ ಮಟ್ಟದಲ್ಲಿ ಪ್ರವೃತ್ತಿಯ ಬದಲಾವಣೆಯ

ಅವಶ್ಯಕತೆ ಇದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವ ಎಚ್.ಕೆ.ಪಾಟೀಲ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ಇಂದು ಎಲ್ಲಾ ರಾಜ್ಯಗಳ ಪಂಚಾಯತ ರಾಜ್ ಸಚಿವರ, ಪ್ರಧಾನ ಕಾರ್ಯದರ್ಶಿಗಳ, ಅಖಿಲ ಭಾರತ ಸಮ್ಮೇಳನದಲ್ಲಿ ಅವರು ಇಂದು ಮಾತನಾಡುತ್ತಿದ್ದರು.

ಕರ್ನಾಟಕ ರಾಜ್ಯದಲ್ಲಿ ಇತ್ತೀಚೆಗೆ ಕರ್ನಾಟಕ ಗ್ರಾಮ ಸ್ವರಾಜ್ ಕಾಯ್ದೆಯ ಸ್ವರೂಪ ಬದಲಾವಣೆ ಮಾಡಿ ತಂದಿರುವ ಕ್ರಾಂತಿಕಾರಕ ಬದಲಾವಣೆಗಳನ್ನು ಒಂದೊಂದಾಗಿ ಪಟ್ಟಿ ಮಾಡಿದ ಸಚಿವರು ಅಧಿಕಾರದ ವಿಕೇಂದ್ರಿಕರಣದಲ್ಲಿ ಇಂತಹ ಕ್ರಾಂತಿಕಾರಕ ಕಾನೂನೊಂದನ್ನು ಜಾರಿಗೆ ತಂದಿರುವ ಕೀರ್ತಿ ಕರ್ನಾಟಕ ರಾಜ್ಯದ್ದು ಎಂಬುದನ್ನು ಅತ್ಯಂತ ತೃಪ್ತಿದಾಯಕವಾಗಿ ಮತ್ತು ಹೆಮ್ಮೆಯಿಂದ ಹೇಳುವುದಾಗಿ ತಿಳಿಸಿದರು. ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರವು ಪಂಚಾಯತಿಗಳಿಗೆ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗದ ಅಧಿಕಾರಗಳನ್ನು ನೀಡುವ ನಿಟ್ಟಿನಲ್ಲಿ ಹೊಸ ಸ್ವರೂಪದ ಗ್ರಾಮಸ್ವರಾಜ್ ಕಾಯ್ದೆಯನ್ನು ಅನುಷ್ಠಾನಗೊಳಿಸಿದೆ ಎಂದು ಸಚಿವರು ವಿವರಿಸಿದರು. ರಾಷ್ಟ್ರದಲ್ಲಿಯೇ ಮೊಟ್ಟಮೊದಲ ಬಾರಿಗೆ ಪಂಚಾಯತ ಆಡಳಿತದಲ್ಲಿ ಪಂಚಾಯತಿ ನೀತಿಯ ನಿರ್ದೇಶನಾ ತತ್ವಗಳು ಜಾರಿಗೆ ತಂದಿದ್ದು ಪಂಚಾಯತಿ ಸದಸ್ಯರು ಮತ್ತು ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹೊಣೆಗಾರಿಕೆ ಮತ್ತು ಕರ್ತವ್ಯಗಳನ್ನು ಪಟ್ಟಿ ಮಾಡಿದ ಮೊಟ್ಟಮೊದಲ ರಾಜ್ಯ ಕರ್ನಾಟಕ ಎಂದು ಎಲ್ಲಾ ರಾಜ್ಯಗಳ ಕರತಾಡನದ ಮಧ್ಯ ಘೋಷಿಸಿದರು. ಗ್ರಾಮೀಣ ಬದುಕಿನಲ್ಲಿ ಸ್ವಾವಲಂಬಿ, ಪರಸ್ಪರ ಗೌರವ-ಘನತೆ ಕಾಪಾಡುವ ಸಮಾನತೆಯನ್ನು ಸುನಿಶ್ಚಿತಗೊಳಿಸುವ ಪಾರದರ್ಶಕ ವ್ಯವಸ್ಥೆಯನ್ನು ಪಾಲ್ಗೊಳ್ಳುವಿಕೆಯ ಮೂಲಕ ಅನುಷ್ಠಾನಗೊಳಿಸುವ ಮತ್ತು ಕುಂದುಕೊರತೆ ನಿವಾರಣೆಗೆ ಸ್ಪಂದನಶೀಲ ಕಾರ್ಯವಿಧಾನ ಕಲ್ಪಿಸುವ ವ್ಯವಸ್ಥೆ ರೂಪಿಸಿ ಗ್ರಾಮೀಣ ಬದುಕಿನಲ್ಲಿ ಗುಣಾತ್ಮಕ ಬದಲಾವಣೆ ತರುವ ದಿಸೆಯಲ್ಲಿ ಈ ತಿದ್ದುಪಡಿ ಪ್ರಮುಖ ಅಸ್ತ್ರವಾಗಿದೆ ಎಂದು ಮಾನ್ಯ ಸಚಿವರು ತಿಳಿಸಿದರು. ರಾಷ್ಟ್ರದಲ್ಲಿಯೇ ಮೊದಲ ಬಾರಿಗೆ ಜನವಸತಿ ಸಭೆ ಮತ್ತು ವಾರ್ಡ್ ಸಭೆಗಳನ್ನು ಹಾಗೂ ಕಂದಾಯ ಗ್ರಾಮಕ್ಕೊಂದು ಗ್ರಾಮ ಸಭೆಗಳನ್ನು ಜಾರಿಗೆ ತರುವ ಮೂಲಕ ಇಡೀ ಗ್ರಾಮೀಣ ಆಡಳಿತವನ್ನು ಪಾರದರ್ಶಕಗೊಳಿಸಲಾಗಿದೆ ಎಂದು ಮಾನ್ಯ ಸಚಿವರು ಅಭಿಪ್ರಾಯ ಪಟ್ಟರು.

ಕರ್ನಾಟಕ ರಾಜ್ಯವು 14ನೇ ಹಣಕಾಸು ಆಯೋಗದ ಅನುದಾನವನ್ನು ಜನಸಂಖ್ಯೆ ಮತ್ತು ಭೌಗೋಳಿಕ ಪ್ರದೇಶದ ಆಧಾರದ ಮೇಲೆ 90:10 ಅನುಪಾತದಲ್ಲಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುತ್ತಿದೆ. ಕುಡಿಯುವ ನೀರು ಮತ್ತು ನೈರ್ಮಲ್ಯದ ವಿಷಯಗಳನ್ನು ಆದ್ಯತಾ ವಲಯವೆಂದು ಪರಿಗಣಿಸಲಾಗಿದೆ. ಪ್ರಾಶಸ್ತ್ಯದ ಆಧಾರದಲ್ಲಿ ರಸ್ತೆಗಳು, ಒಳಚರಂಡಿ, ಬೀದಿ ದೀಪ ಮತ್ತು ಸ್ಮಶಾನಗಳ ಅಭಿವೃದ್ಧಿ ಮುಂತಾದವುಗಳನ್ನು ಕೈಗೆತ್ತಿಕೊಳ್ಳಲು ತೀರ್ಮಾನಿಸಲಾಗಿದೆ. ಯೋಜನೆಗಳ ಅನುಷ್ಠಾನದಲ್ಲಿ ಮತ್ತು ಆಡಳಿತದಲ್ಲಿ ಆಧುನಿಕ ಚಟುವಟಿಕೆಗಳನ್ನು ಅಳವಡಿಸಿಕೊಳ್ಳುವ

ಗ್ರಾಮ ಪಂಚಾಯತಿಗಳಿಗೆ ಶೇ. 10ರಷ್ಟು ಹೆಚ್ಚುವರಿ ಅನುದಾನ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು  ಸಚಿವರು ಅಖಿಲ ಭಾರತ ಸಮ್ಮೇಳನದಲ್ಲಿ ತಿಳಿಸಿದರು.

ಕರ್ನಾಟಕ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ತಮ್ಮದೇ ಆದ ನಮ್ಮಗ್ರಾಮ-ನಮ್ಮ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯೊಂದನ್ನು ಸಿದ್ಧಪಡಿಸಿ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ತಿಳಿಸಲಾಗಿದ್ದು, ಅದರಂತೆ ಎಲ್ಲಾ ಗ್ರಾಮ ಪಂಚಾಯತಿಗಳು ಅಗತ್ಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಆಗಸ್ಟ ಕ್ರಾಂತಿಯ ಐತಿಹಾಸಿಕ ದಿನವಾದ 9ನೇ ಆಗಸ್ಟ್-2016 ರಂದು ಅನುಷ್ಠಾನಕ್ಕೆ ತರುವ ಮೂಲಕ ಕ್ರಾಂತಿಕಾರಕ ಇತಿಹಾಸಕ್ಕೆ ನಾಂದಿ ಆಗಲಿದೆ ಎಂದು  ಸಚಿವರು ಸಭೆಗೆ ತಿಳಿಸಿದರು. ಈ ಯೋಜನೆಗಳ ಸಿದ್ಧತೆಗೆ ಈಗಾಗಲೇ 31 ವಿವಿಧ ಚಟುವಟಿಕೆಗಳನ್ನು ಗುರುತಿಸಲಾಗಿದ್ದು ಅಗತ್ಯ ಕ್ರಮ ಕೈಗೊಳ್ಳಲು ವೇಳಾಪಟ್ಟಿಯನ್ನು ಸಿದ್ಧಪಡಿಸಿ ಗ್ರಾಮ ಪಂಚಾಯತಿಗಳಿಗೆ ಕಳುಹಿಸಲಾಗಿದೆ.

ಕರ್ನಾಟಕ ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಷಯಗಳ ವಿಶ್ವವಿದ್ಯಾಲಯವು ಇದೇ ಶೈಕ್ಷಣಿಕ ವರ್ಷದಿಂದ ಗದಗ ನಗರದಲ್ಲಿ ಪ್ರಾರಂಭವಾಗುತ್ತಿದೆ. ಗ್ರಾಮೀಣಾಭಿವೃದ್ಧಿ ವಿಷಯಗಳ ಅಧ್ಯಯನಕ್ಕೆ ವಿಶ್ವವಿದ್ಯಾಲಯವೊಂದನ್ನು ಸ್ಥಾಪಿಸಿದ ಕೀರ್ತಿ ಕರ್ನಾಟಕಕ್ಕೆ ಸಲ್ಲುತ್ತದೆ ಎಂದು ಸಚಿವರು ಹೆಮ್ಮೆ ಪಟ್ಟರು. ಗ್ರಾಮೀಣ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಶಾಸನಾತ್ಮಕ ಬೆಂಬಲ ನೀಡಿದ ರಾಜ್ಯ ಕರ್ನಾಟಕ. ಸಮಗ್ರ ಶಾಸನದ ಸ್ವರೂಪ ಬದಲಾಯಿಸುವ ಮೂಲಕ ಪಂಚಾಯತಿಗಳು ತನ್ನ ವ್ಯಾಪ್ತಿಯ ನಾಗರೀಕರಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸುವಲ್ಲಿ ಮುಂಚೂಣಿಯಲ್ಲಿ ನಿಲ್ಲಲು ಹಾಗೂ ನಾಗರೀಕರ ಬೇಕು ಬೇಡಗಳಿಗೆ ಸ್ಪಂದಿಸಲು ಆಡಳಿತದ ವಿವಿಧ ಇಲಾಖೆಗಳ ನಡುವಿನ ಸಂಪರ್ಕದ ಕೊಂಡಿಯಾಗಿ ಕಾರ್ಯನಿರ್ವಹಿಸುವಂತಹ ಶಾಸನಾತ್ಮಕ ಅವಕಾಶ ಒದಗಿಸಲಾಗಿದೆ ಎಂದು ಸಚಿವರು ಪ್ರಕಟಿಸಿದರು. ಈ ಹೊಸ ಸ್ವರೂಪದ ಶಾಸನದ ಮೂಲಕ ಗ್ರಾಮೀಣ ಜನರನ್ನು ಅಧಿಕಾರಯುಕ್ತರನ್ನಾಗಿ ಮಾಡುವ ಮತ್ತು ಧ್ವನಿಯಿಲ್ಲದ  ಸಣ್ಣ ಸಣ್ಣ ಜನವಸತಿಗಳ ಗ್ರಾಮೀಣರಿಗೂ ಸಹಾ ಜನವಸತಿ ಸಭೆಯ  ಹೊಸ ಪ್ರಯೋಗ  ಮಾಡುವ ಮೂಲಕ ಮತ್ತು ವಾರ್ಡ್ ಸಭೆಗಳ  ಮೂಲಕ ಹೆಚ್ಚಿನ ಧ್ವನಿ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಬಾಬು/ಕೆಎಂ